ದಿನಾಂಕ 04-03-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಎನ್**.**ವಿ**.** ವಾದಿ  ಪರ ವಕೀಲರಿಂದಃ

ನನ್ನ ಸಾಕ್ಷಿ ಹೇಳಿಕೆಯ ಭಾಗವಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆ. ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸಾಕ್ಷಿಯು ನಿಪಿ-1 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು.

ನಿಪಿ-1 ಅನ್ನು ಗೌತಮ್ ರವರು ವಾದಿಗೆ ನನ್ನ ಸಮಕ್ಷಮ ಬರೆದುಕೊಟ್ಟಿರುತ್ತಾರೆ.

ನಿಪಿ-1 ರ ದಾಖಲೆಯನ್ನು ಬರೆಯುವಾಗ 1 ನೇ ಪ್ರತಿವಾದಿಗೆ ಮುಂಗಡ ಹಣವಾಗಿ ರೂ. 4,50,000/- ಗಳನ್ನು ನಗದು ರೂಪದಲ್ಲಿ ವಾದಿಯು ನೀಡಿದ್ದರು.

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯ ಹಾಗೂ ದಾಸ್ತಾವೇಜುಗಳನ್ನು ಪರಿಶೀಲಿಸಿ ವಾದಿಯ ದಾವೆಯನ್ನು ಪುರಸ್ಕರಿಸಿ ವಾದಿಯ ದಾವೆಯಲ್ಲಿ ಕೋರಿರುವಂತೆ ಡಿಕ್ರಿ ಮಾಡಬೇಕೆಂದು ಕೋರುತ್ತೇನೆ.

**(**ಪಾಟೀ ಸವಾಲಿಗೆ ಪ್ರತಿವಾದಿಗಳ ಪರ ವಕೀಲರು ಕಾಲಾವಕಾಶ ಕೋರಿದ್ದು ನೀಡಲಾಯಿತು**.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ. ಇದೆ

ಸಹಿ/-
ಪ್ರ.ಸಿ.ನ್ಯಾ ಮತ್ತು ಜೆಎಂಎಫ್‌ಸಿ,
ಗೌರಿಬಿದನೂರು